# ಕರ್ನಾಟಕ ಸರ್ಕಾರದ ನಡವಳಿ

ವಿಷಯ: ಕಲಬುರಗಿಯಲ್ಲಿ ಸ್ಥಾಪಿಸಲಾಗುತ್ತಿರುವ ಅಬ್ದುಲ್ ನಜೀರ್ ಸಾಬ್ ರಾಜ್ಯ ಗ್ರಾಮೀಣ ಅಭಿವೃದ್ಧಿ ಮತ್ತು ಪಂ.ರಾಜ್ ಸಂಸ್ಥೆಯ ಪ್ರಾದೇಶಿಕ ತರಬೇತಿ ಕೇಂದ್ರದ ಕಟ್ಟಡ ಕಾಮಗಾರಿಯನ್ನು ರೂ. 7.05 ಕೋಟಿಗಳ ವೆಚ್ಚದಲ್ಲಿ ಕರ್ನಾಟಕ ಗ್ರಾಮೀಣ ಮೂಲಭೂತ ಸೌಕರ್ಯ ಅಭಿವೃದ್ಧಿ ನಿಯಮಿತದ ಮೂಲಕ ನಿರ್ಮಿಸಲು ಅನುಮೋದನೆ ನೀಡುವ ಮತ್ತು ಮೊದಲನೇ ಕಂತಿನ ಅನುದಾನ ಬಿಡುಗಡೆಗೊಳಿಸುವ ಬಗ್ಗೆ.

---

ಓದಲಾಗಿದೆ:

1. ಸರ್ಕಾರದ ಆದೇಶ ಸಂ. ಗ್ರಾಅಪ 81 ತಾಪಸ 2013, ದಿನಾಂಕ 12.11.2013.
2. ಸರ್ಕಾರದ ಆದೇಶ ಸಂ. ಗ್ರಾಅಪ 81 ತಾಪಸ 2013, ದಿನಾಂಕ 22.12.2014.
3. ಸರ್ಕಾರದ ಅಧಿಸೂಚನೆ ಸಂ. ಆಇ 60 ವೆಚ್ಚ-12/15, ದಿನಾಂಕ: 23.02.2015.

ಪ್ರಸ್ತಾವನೆ:

ಮೇಲೆ ಕ್ರಮ. ಸಂಖ್ಯೆ (2)ರಲ್ಲಿ ಓದಲಾದ ಸರ್ಕಾರದ ಆದೇಶದಲ್ಲಿ ಕಲಬುರಗಿಯಲ್ಲಿ ಅಬ್ದುಲ್ ನಜೀರ್ ಸಾಬ್ ರಾಜ್ಯ ಗ್ರಾಮೀಣ ಅಭಿವೃದ್ಧಿ ಸಂಸ್ಥೆಯ ಪ್ರಾದೇಶಿಕ ತರಬೇತಿ ಕೇಂದ್ರವನ್ನು ಸ್ಥಾಪಿಸಲು ಸರ್ಕಾರವು ಆಡಳಿತಾತ್ಮಕ ಮಂಜೂರಾತಿ ನೀಡಿ ಈ ಕಾಮಗಾರಿಯನ್ನು ಕರ್ನಾಟಕ ಗ್ರಾಮೀಣ ಮೂಲ ಸೌಕರ್ಯ ಅಭಿವೃದ್ಧಿ ನಿಯಮಿತಕ್ಕೆ ವಹಿಸಲು ಆದೇಶಿಸಿರುತ್ತದೆ. ಈ ಆದೇಶವನ್ನು ಆರ್ಥಿಕ ಇಲಾಖೆಯ ಸಲಹೆಯಂತೆ ಸಚಿವ ಸಂಪುಟದ ಅನುಮೋದನೆ ಪಡೆದು ಹೊರಡಿಸಲಾಗಿತ್ತು. ಆದಾಗ್ಯೂ ಕರ್ನಾಟಕ ಗ್ರಾಮೀಣ ಮೂಲ ಸೌಕರ್ಯ ಅಭಿವೃದ್ಧಿ ನಿಯಮಿತಕ್ಕೆ ಸದರಿ ಕಾಮಗಾರಿಯನ್ನು ವಹಿಸಲು ಕರ್ನಾಟಕ ಸಾರ್ವಜನಿಕ ಸಂಗ್ರಹಣೆಗಳಲ್ಲಿ ಪಾರದರ್ಶಕತೆ ಅಧಿನಿಯಮ 1999ರ ಕಲಂ 4(ಜಿ)ರಡಿಯಲ್ಲಿ ಆರ್ಥಿಕ ಇಲಾಖೆಯಿಂದ ಮೇಲೆ ಕ್ರ. ಸಂಖ್ಯೆ (3)ರ ಅಧಿಸೂಚನೆಯಲ್ಲಿ ವಿನಾಯತಿ ಪಡೆದುದರಿಂದ ಮೇಲೆ ಕ್ರಸಂಖ್ಯೆ (2)ರಲ್ಲಿ ಓದಲಾದ ಸರ್ಕಾರದ ಆದೇಶ ಸಂ. ಗ್ರಾಅಪ 81 ತಾಪಸ 2013, ದಿನಾಂಕ 22.12.2014ನ್ನು ಈ ಮೂಲಕ ಹಿಂಪಡೆದು ಈ ಕೆಳಗಿನಂತೆ ಪರಿಷ್ಕೃತ ಆದೇಶ ಹೊರಡಿಸಿದೆ.

ಮೇಲೆ ಕ್ರಸಂಖ್ಯೆ (1)ರಲ್ಲಿ ಓದಲಾದ ಸರ್ಕಾರದ ಆದೇಶದಲ್ಲಿ ಕಲಬುರಗಿಯಲ್ಲಿ ಅಬ್ದುಲ್ ನಜೀರ್ ಸಾಬ್ ರಾಜ್ಯ ಗ್ರಾಮೀಣ ಅಭಿವೃದ್ಧಿ ಸಂಸ್ಥೆಯ ಪ್ರಾದೇಶಿಕ ತರಬೇತಿ ಕೇಂದ್ರವನ್ನು ಸ್ಥಾಪಿಸಲು ಸರ್ಕಾರವು ಮಂಜೂರಾತಿ ನೀಡಿರುತ್ತದೆ. ಪ್ರಸ್ತುತ ಈ ತರಬೇತಿ ಕೆಂದ್ರವು ಕಲಬುರಗಿ ತಾಲ್ಲೂಕು ಪಂಚಾಯತಿ ಸಾಮರ್ಥ್ಯಾಭಿವೃದ್ಧಿ ಸೌಧದಲ್ಲಿ ಕಾರ್ಯನಿರ್ವಹಿಸುತ್ತಿದೆ. ಆದರೆ, ಈ ತಾತ್ಕಾಲಿಕ ವ್ಯವಸ್ಥೆಯು ಚುನಾಯಿತ ಸದಸ್ಯರುಗಳಿಗೆ ಮತ್ತು ಪಂಚಾಯತ್ ರಾಜ್ ಸಂಸ್ಥೆಯ ಅಧಿಕಾರಿಗಳಿಗೆ ತರಬೇತಿಯನ್ನು ನೀಡಲು ಸೂಕ್ತವಾಗಿರುವುದಿಲ್ಲವಾದ್ದರಿಂದ, ಈ ಪ್ರಾದೇಶಿಕ ತರಬೇತಿ ಕೇಂದ್ರಕ್ಕೆ ಪ್ರತ್ಯೇಕ ಕಟ್ಟಡವನ್ನು ನಿರ್ಮಿಸುವುದು ಅತ್ಯಾವಶ್ಯವಿರುತ್ತದೆ.

ಪ್ರಾದೇಶಿಕ ತರಬೇತಿ ಕೇಂದ್ರ ಮತ್ತು ಜಿಲ್ಲಾ ಪಂಚಾಯತಿ ಸಂಪನ್ಮೂಲ ಕೇಂದ್ರದ ಕಟ್ಟಡಗಳ ನಿರ್ಮಾಣಕ್ಕೋಸ್ಕರ ಕಲಬುರಗಿ ತಾಲ್ಲೂಕಿನ ಕೆಸರಟಗಿ ಗ್ರಾಮದ ಸರ್ವೆ ನಂ.89/1 ರಲ್ಲಿ 3.05 ಎಕರೆ ಜಮೀನನ್ನು ಜಿಲ್ಲಾಧಿಕಾರಿ, ಕಲಬುರಗಿ ರವರು ತಮ್ಮ ಆದೇಶ ಸಂ. ಕಂ.ಭೂಮಿ-ಅ/173/2014-15, ದಿನಾಂಕ 20.11.2014 ರಂದು ಮಂಜೂರು ಮಾಡಿರುತ್ತಾರೆ.

ಅಂದಾಜು ಸಿದ್ಧಪಡಿಸಿದ್ದಂತೆ ಕಲಬುರಗಿಯಲ್ಲಿ ಪ್ರಾದೇಶಿಕ ತರಬೇತಿ ಕೇಂದ್ರ ಮತ್ತು ಜಿಲ್ಲಾ ಪಂಚಾಯತ್ ಸಂಪನ್ಮೂಲ ಕೇಂದ್ರದ ಸ್ಥಾಪನೆಗೆ ಸುಮಾರು ರೂ.8.55 ಕೋಟಿಗಳಷ್ಟು ಖರ್ಚು ತಗಲುತ್ತದೆ. ಈ ಪೈಕಿ ರೂ. 1.50 ಕೋಟಿಯನ್ನು ಕೇಂದ್ರ ಪ್ರಾಯೋಜಿತ ರಾಜೀವ್ ಗಾಂಧಿ ಪಂಚಾಯತ್ ಸಶಕ್ತೀಕರಣ ಅಭಿಯಾನ ಯೋಜನೆಯಡಿಯಲ್ಲಿ ಭರಿಸಲು ಉದ್ದೇಶಿಸಲಾಗಿರುತ್ತದೆ. ಉಳಿದ ರೂ. 7.05 ಕೋಟಿಯನ್ನು ರಾಜ್ಯ ಯೋಜನಾ ನಿಧಿಯಿಂದ ಭರಿಸುವ ಅವಶ್ಯಕತೆ ಇರುತ್ತದೆ.

2014-15ನೇ ಸಾಲಿನ ಆರ್ಥಿಕ ಸಾಲಿನಲ್ಲಿ ಲೆಕ್ಕಶೀರ್ಷಿಕೆ 2515-00-102-0-08(ಯೋಜನೆ) ರೂ. 109.49 ಲಕ್ಷಗಳನ್ನು ಆವರ್ತಕ ವೆಚ್ಚಕ್ಕೋಸ್ಕರ ಒದಗಿಸಲಾಗಿದೆ. ಆದರೆ, ಕಲಬುರಗಿಯ ಪ್ರಾದೇಶಿಕ ತರಬೇತಿ ಕೇಂದ್ರದ ಕಟ್ಟಡದ ನಿರ್ಮಾಣಕ್ಕೆ ಯಾವುದೇ ಅನುದಾನವನ್ನು ಒದಗಿಸಿರುವುದಿಲ್ಲ. ಆದುದರಿಂದ, ಈ ಪ್ರಾದೇಶಿಕ ತರಬೇತಿ ಕೇಂದ್ರದ ಕಟ್ಟಡದ ನಿರ್ಮಾಣಕ್ಕೆ ಅವಶ್ಯಕವಿರುವ ಅನುದಾನವನ್ನು ಒದಗಿಸಿ, ರೂ. 7.05 ಕೋಟಿ ಅಂದಾಜು ವೆಚ್ಚದಲ್ಲಿ ಈ ಕಟ್ಟಡವನ್ನು ನಿರ್ಮಿಸಲು ಆಡಳಿತಾತ್ಮಕ ಮಂಜೂರಾತಿ ನೀಡಲು ಹಾಗೂ ಈ ಕಟ್ಟಡದ ನಿರ್ಮಾಣ ಕಾಮಗಾರಿಯನ್ನು ತ್ವರಿತವಾಗಿ ನಿರ್ವಹಿಸುವ ಸಲುವಾಗಿ ಹಾಗೂ ಜಿಲ್ಲಾ ಪಂಚಾಯತಿ ಸಂಪನ್ಮೂಲ ಕೇಂದ್ರದ ಕಟ್ಟಡದ ನಿರ್ಮಾಣವನ್ನು ಕರ್ನಾಟಕ ಗ್ರಾಮೀಣ ಮೂಲಭೂತ ಸೌಕರ್ಯ ಅಭಿವೃದ್ಧಿ ನಿಯಮಿತ ಇವರಿಗೆ ಈಗಾಗಲೇ ವಹಿಸಿರುವ ಪ್ರಯುಕ್ತ ಈ ಕಾಮಗಾರಿಯ ಅನುಷ್ಠಾನವನ್ನು ಸದರಿ ಸಂಸ್ಥೆಗೆ ವಹಿಸಲು ಸರ್ಕಾರವು ನಿರ್ಣಯಿಸಿದೆ.

ಈ ಕಾಮಗಾರಿಯನ್ನು ಕರ್ನಾಟಕ ಗ್ರಾಮೀಣ ಮೂಲ ಸೌಕರ್ಯ ಅಭಿವೃದ್ಧಿ ನಿಯಮಿತಕ್ಕೆ ವಹಿಸಲು ಸಾರ್ವಜನಿಕ ಸಂಗ್ರಹಣೆಗಳಲ್ಲಿ ಪಾರದರ್ಶಕತೆ ಅಧಿನಿಯಮ 1999ರ ಕಲಂ 4(ಜಿ)ರಡಿಯಲ್ಲಿ ವಿನಾಯಿತಿ ನೀಡಿ ಮೇಲೆ ಕ್ರ. ಸಂಖ್ಯೆ (3)ರಲ್ಲಿ ಓದಲಾದ ಅಧಿಸೂಚನೆಯಲ್ಲಿ ಆರ್ಥಿಕ ಇಲಾಖೆ ಆದೇಶಿಸಿರುತ್ತದೆ.

ಅದರಂತೆ, ಈ ಕೆಳಕಂಡ ಆದೇಶ.

**ಸರ್ಕಾರದ ಆದೇಶ ಸಂ. ಗ್ರಾಅಪ 81 ತಾಪಸ 2013, ಬೆಂಗಳೂರು, ದಿನಾಂಕ 20-06-2015**

ಪ್ರಸ್ತಾವನೆಯಲ್ಲಿ ವಿವರಿಸಿದ ಅಂಶಗಳ ಹಿನ್ನೆಲೆಯಲ್ಲಿ, ದಿನಾಂಕ: 22-12-2014ರ ಸರ್ಕಾರದ ಆದೇಶವನ್ನು ಹಿಂಪಡೆದು ಕಲಬುರಗಿಯ ಅಬ್ದುಲ್ ನಜೀರ್ ಸಾಬ್ ರಾಜ್ಯ ಗ್ರಾಮೀಣಾಭಿವೃದ್ಧಿ ಸಂಸ್ಥೆಯ ಪ್ರಾದೇಶಿಕ ತರಬೇತಿ ಕೇಂದ್ರದ ಕಟ್ಟಡವನ್ನು ರೂ. 7.05 ಕೋಟಿ (ಏಳು ಕೋಟಿ ಐದು ಲಕ್ಷ ರೂಪಾಯಿಗಳು ಮಾತ್ರ) ಅಂದಾಜು ವೆಚ್ಚದಲ್ಲಿ ನಿರ್ಮಿಸಲು ಸರ್ಕಾರವು ಈ ಮೂಲಕ ಆಡಳಿತಾತ್ಮಕ ಮಂಜೂರಾತಿ ನೀಡಿದೆ. ಈ ಮೊತ್ತದ ಮೂರನೇ ಒಂದರಷ್ಟು ಅಂದರೆ ರೂ. 2.35 ಕೋಟಿ (ಎರಡು ಕೋಟಿ ಮೂವತ್ತೈದು ಲಕ್ಷ ರೂಪಾಯಿಗಳು ಮಾತ್ರ) ಹೆಚ್ಚುವರಿ ಆಯವ್ಯಯವನ್ನು ಲೆಕ್ಕಶೀರ್ಷಿಕೆ 2515-00-102-0-08-386(ಯೋಜನೆ) ಪೂರಕ ಅಂದಾಜು-1ರಲ್ಲಿ ಒದಗಿಸಲು ಮಂಜೂರಾತಿ ನೀಡಿದೆ.

ಮುಂದುವರೆದು, ಈ ಕಟ್ಟಡದ ನಿರ್ಮಾಣ ಕಾಮಗಾರಿಯನ್ನು ಕರ್ನಾಟಕ ಗ್ರಾಮೀಣ ಮೂಲಸೌಕರ್ಯ ಅಭಿವೃದ್ಧಿ ನಿಯಮಿತಕ್ಕೆ ವಹಿಸಿಕೊಡಲು ಸಹ ಮಂಜೂರಾತಿ ನೀಡಿದೆ.

ಮೊದಲನೇ ಕಂತಿನ ಅನುದಾನ ರೂ. 2.35 ಕೋಟಿಗಳನ್ನು (ರೂಪಾಯಿ ಎರಡು ಕೋಟಿ ಮೂವತ್ತೈದು ಲಕ್ಷಗಳು ಮಾತ್ರ) ವ್ಯವಸ್ಥಾಪಕ ನಿರ್ದೇಶಕರು, ಕರ್ನಾಟಕ ಗ್ರಾಮೀಣ ಮೂಲಭೂತ ಸೌಕರ್ಯ ಅಭಿವೃದ್ಧಿ ನಿಗಮ ನಿಯಮಿತ, ಬೆಂಗಳೂರು ಇವರಿಗೆ ಬಿಡುಗಡೆಗೊಳಿಸಿ ಆದೇಶಿಸಿದೆ.

ಈ ಆದೇಶವನ್ನು ಪ್ರಕರಣ ಸಂ.ಸಿ:629:2014, ದಿನಾಂಕ 28.11.2014ರಲ್ಲಿ ಸಚಿವ ಸಂಪುಟವು ನೀಡಿರುವ ಅನುಮೋದನೆಯಂತೆ ಹಾಗೂ ಆರ್ಥಿಕ ಇಲಾಖೆಯ ಟಿಪ್ಪಣಿ ಸಂ. ಆಇ 325 ವೆಚ್ಚ-6/2013, ದಿನಾಂಕ: 18-06-2015ರಲ್ಲಿ ನೀಡಿರುವ ಸಹಮತಿ ಅನುಸಾರ ಹೊರಡಿಸಿದೆ.

ಕರ್ನಾಟಕ ರಾಜ್ಯಪಾಲರ ಆಜ್ಞಾನುಸಾರ ಮತ್ತು ಅವರ
ಹೆಸರಿನಲ್ಲಿ,

P Devasahayam

(ಪಿ.ದೇವಸಹಾಯಂ)
ಸರ್ಕಾರದ ಅಧೀನ ಕಾರ್ಯದರ್ಶಿ(ಜಿ.ಪಂ)(ಪ್ರ)
ಗ್ರಾಮೀಣಾಭಿವೃದ್ಧಿ ಮತ್ತು ಪಂ.ರಾಜ್ ಇಲಾಖೆ

ಇವರಿಗೆ:

1. ಮಹಾಲೇಖಪಾಲರು, ಕರ್ನಾಟಕ, ಬೆಂಗಳೂರು.
2. ಸರ್ಕಾರದ ಪ್ರಧಾನ ಕಾರ್ಯದರ್ಶಿಗಳು, ಆರ್ಥಿಕ ಇಲಾಖೆ/ಯೋಜನಾ ಇಲಾಖೆ.
3. ಮಹಾನಿರ್ದೇಶಕರು, ಆಡಳಿತ ತರಬೇತಿ ಸಂಸ್ಥೆ, ಮೈಸೂರು.
4. ಜಿಲ್ಲಾಧಿಕಾರಿ, ಕಲಬುರಗಿ ಜಿಲ್ಲೆ, ಕಲಬುರಗಿ.
5. ವ್ಯವಸ್ಥಾಪಕ ನಿರ್ದೇಶಕರು, ಕರ್ನಾಟಕ ಗ್ರಾಮೀಣ ಮೂಲಸೌಕರ್ಯ ಅಭಿವೃದ್ಧಿ ನಿಯಮಿತ, ಬೆಂಗಳೂರು.
6. ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ, ಜಿಲ್ಲಾ ಪಂಚಾಯತಿ, ಕಲಬುರಗಿ.
7. ನಿರ್ದೇಶಕರು, ಅಬ್ದುಲ್ ನಜೀರ್ ಸಾಬ್ ರಾಜ್ಯ ಗ್ರಾಮೀಣಾಭಿವೃದ್ಧಿ ಸಂಸ್ಥೆ, ಮೈಸೂರು.
8. ಅಪರ ಕಾರ್ಯದರ್ಶಿಗಳು (ಆಡಳಿತ), ಗ್ರಾ.ಅ&ಪಂ.ರಾಜ್ ಇಲಾಖೆ.
9. ನಿರ್ದೇಶಕರು, ರಾಜ್ಯ ಹುಜೂರ್ ಖಜಾನೆ, ಬೆಂಗಳೂರು.
10. ಖಜಾನಾಧಿಕಾರಿ, ಕಲಬುರಗಿ.
11. ಸಚಿವ ಸಂಪುಟ ಶಾಖೆ, ವಿಧಾನ ಸೌಧ (ಸಿ:629:2014, ದಿನಾಂಕ 28.11.2014).
12. ಆರ್ಥಿಕ ಇಲಾಖೆ (ವೆಚ್ಚ-6), ವಿಧಾನ ಸೌಧ.
13. ಆಂತರಿಕ ಆರ್ಥಿಕ ಸಲಹೆಗಾರರು, ಗ್ರಾ.ಅ&ಪಂ.ರಾಜ್ ಇಲಾಖೆ.
14. ಕರ್ನಾಟಕ ವಿಕಾಸ/ವೆಬ್‌ಸೈಟ್.
15. ಶಾಖಾ ರಕ್ಷಾ ಕಡತ/ಹೆಚ್ಚುವರಿ ಪ್ರತಿ.

ಪ್ರತಿ:

1. ಮಾನ್ಯ ಗ್ರಾ.ಅ&ಪಂ.ರಾಜ್ ಸಚಿವರ ಆಪ್ತ ಕಾರ್ಯದರ್ಶಿಗಳು, ವಿಧಾನ ಸೌಧ, ಬೆಂಗಳೂರು.
2. ಸರ್ಕಾರದ ಅಪರ ಮುಖ್ಯ ಕಾರ್ಯದರ್ಶಿಗಳು/ಕಾರ್ಯದರ್ಶಿಗಳು (ಪಂ.ರಾಜ್), ಗ್ರಾ.ಅ&ಪಂ.ರಾಜ್ ಇಲಾಖೆ ಇವರ ಆಪ್ತ ಕಾರ್ಯದರ್ಶಿಗಳು.